ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಗುಡೇಕೋಟೆ

ಸಂ/ಕಂ/ಹ.ಬ./ನಾಕಗು/15/2016-17. ದಿನಾಂಕ 27-09-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಬುಟ್ಟನಾಗಪ್ಪ ತಂದೆ ಲೇಟ್ ಮೋಟಪ್ಪ<br>2)ಕೊಂಡಪ್ಪ ತಂದೆ ರಾಘವೆಂಕಟಪ್ಪ<br>ಕಸಾಪುರ ಗ್ರಾಮ ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಗುಡೇಕೋಟೆ |
| ಕೂಡ್ಲಿಗಿ ತಾಲೂಕು ಹಾಲಸಾಗರ ಗ್ರಾಮದ ಸನಂ 583/9. ವಿಸ್ತೀರ್ಣ 3-60. ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಹಾಲಸಾಗರ ಗ್ರಾಮದ ಸನಂ 583/9. ವಿಸ್ತೀರ್ಣ 3-60. ಎಕ್ರೆ ಜಮೀನನ್ನು ಸದರಿ ತಾಲೂಕು ಕಸಾಪುರ ಗ್ರಾಮದ ಬುಟ್ಟನಾಗಪ್ಪ ತಂದೆ ಲೇಟ್ ಮೋಟಪ್ಪ ಇವರು ದಿನಾಂಕ 29-03-2016. ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಹಾಲಸಾಗರ ಇವರು ನಮೂನೆ-21 ನೋಟಿಸನ್ನು ದಿನಾಂಕ 11-05-2016. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ವಂಶವೃಕ್ಷ ತಾಳೆ ಇಲ್ಲದ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 22/2015-16. ದಿನಾಂಕ 12-06-2016. ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 25-08-2016 ರಿಂದ 27-09-2016. ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಹಾಲಸಾಗರ ಗ್ರಾಮದ ಸನಂ 583/9. ವಿಸ್ತೀರ್ಣ 3-60. ಎಕ್ರೆ ಜಮೀನು ನಮ್ಮ ಮಾವನವರಾದ ಕೊಂಡಪ್ಪ ತಂದೆ ರಾಘವೆಂಕಟಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ತಮ್ಮ ಹಕ್ಕು ಆದೀನದಲ್ಲಿರುವ ಆಸ್ತೀಯನ್ನು ದಿನಾಂಕ 29-03-2016 ರ ಪ್ರಕಾರ ನನ್ನ ಹೆಸರಲ್ಲಿ ಪಾಲು ವಿಭಾಗದ ಪತ್ರ ಬರೆಯಿಸಿ ಕೊಟ್ಟಿರುತ್ತಾರೆ. ಕಾರಣ ಸದರಿ ಪಾಲು ವಿಭಾಗದ ಪತ್ರ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಅರ್ಜಿದಾರರ ಕೋರಿಕೆಯನ್ವಯ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

ಪು.ತಿ.ನೋ-2

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಹಾಲಸಾಗರ ಗ್ರಾಮದ ಸನಂ 583/9. ವಿಸ್ತೀರ್ಣ 3-60. ಎಕ್ರೆ ಜಮೀನನ್ನು ದಿನಾಂಕ 29-03-2016 ರ ಪಾಲು ವಿಭಾಗದ ಪತ್ರ ಪ್ರಕಾರ ಅರ್ಜಿದಾರರಾದ ಬುಟ್ಟನಾಗಪ್ಪ ತಂದೆ ಲೇಟ್ ಮೋಟಪ್ಪ ಕಸಾಪುರ ಗ್ರಾಮ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ. ಹಾಗೂ ಮುದ್ರಾಂಕ ಶುಲ್ಕ ಪಾವತಿಸಲು ಸಹಾ ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 27-09-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಚೇರಿ ಗುಡೇಕೋಟೆ.
ಗುಡೇಕೋಟೆ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಬುಟ್ಟನಾಗಪ್ಪ ತಂದೆ ಲೇಟ್ ಮೋಟಪ್ಪ. ಕೊಂಡಪ್ಪ ತಂದೆ ರಾಘವೆಂಕಟಪ್ಪ ಕಸಾಪುರ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಗುಡೇಕೋಟೆ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.